# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 06(ಥಣಿಸಂದ್ರ)

## ವಾರ್ಡ್‌ಸಮಿತಿ ಸಭೆ, ದಿನಾಂಕ: 21-06-2021ರ

## ಸಭಾ ನಡುವಳಿ

**ದಿನಾಂಕ: 21-06-2021ರಂದು ಬೆಳ್ಳಿಗೆ 11.00 ಗಂಟೆಗೆ** ವಾರ್ಡ್ ನಂ.06 ಥಣಿಸಂದ್ರ ವಾರ್ಡ್ ಸಮಿತಿಯ ನೋಡಲ್ ಅಧಿಕಾರಿಗಳಾದ ಶ್ರೀ ಬಿ.ಎಸ್. ಶ್ರೀಧರ ರವರ ಅಧ್ಯಕ್ಷತೆಯಲ್ಲಿ ಹೆಗಡೆನಗರ, 2ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಬಿಬಿಎಂಪಿ ಸಮುದಾಯಭನವದಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರಸಂ | ಸಭೆಗೆ ಹಾಜರಾಗಿರುವಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಎಸ್. ಶ್ರೀಧರ | ನೋಡಲ್ ಅಧಿಕಾರಿಗಳು ವಾರ್ಡ್ ನಂ 06(ಥಣಿಸಂದ್ರ) ಹಾಗೂ ಸ.ಕಾ.ಅ ವ್ಯಾಟರಾಯನಪುರ ಉಪ ವಿಭಾಗ |
| 2 | ಶ್ರೀ ಸುರೇಶ ದೇವತರಾಜ್ | ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ, ವಾರ್ಡ್ ಸಮಿತಿ, ವಾರ್ಡ್ ನಂ 06(ಥಣಿಸಂದ್ರ) |
| 3 | ಶ್ರೀ ಡಾ॥ ಕೇಶವಪಾಣಿ | ಆರೋಗ್ಯ ವೈದ್ಯಾಧಿಕರಿಗಳು ಪ್ರಾಥಮಿಕ ಆರೋಗ್ಯ ಕೇಂದ್ರ, ಹೆಗಡೆನಗರ |
| 4 | ಶ್ರೀ ಶ್ರೀನಿವಾಸ್ | ಸಹಾಯಕ ಅಭಿಯಂತರರ ಯೋಜನಾ ವಿಭಾಗ, ಯಲಹಂಕ ಬಿಬಿಎಂಪಿ |
| 5 | ಶ್ರೀ ವೆಂಕಟೇಶ್ | ಕಂದಾಯ ನೀರಿಕ್ಷಕರು, ಥಣಿಸಂದ್ರ |
| 6 | ಶ್ರೀ ಪ್ರೇಮಕುಮಾರ್ | ಹಿರಿಯಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 06 (ಥಣಿಸಂದ್ರ) |
| 7 | ಶ್ರೀ ಮಹೇಶ್ | ಕಿರಿಯಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 06 (ಥಣಿಸಂದ್ರ) |

**ಶ್ರೀ ಸುರೇಶದೇವತರಾಜ್:** ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂಯರರು, ವಾರ್ಡ್ ನಂ 06 ರವರು ಸಭೆಗೆಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಸಮಿತಿಯ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡಾ ವಿಷಯದ ಬಗ್ಗೆ ತಿಳಿಸಿದರು.

1. **ಕೋವಿಡ್ -19 ರ ಸಂಬಂಧ ಸೊಂಕು ಹರಡವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮಂಜಾಗ್ರತ ಕ್ರಮಗಳ ಬಗ್ಗೆ.** ಶ್ರೀ ಡಾ॥ ಕೇಶವಪಾಣಿ ಆರೋಗ್ಯ ವೈದ್ಯಾಧಿಕಾರಿಗಳು, ಹೆಗಡೆನಗರ ಪ್ರಾಥಮಿಕ ಆರೋಗ್ಯ ಕೇಂದ್ರರವರು ಮಾತನಾಡಿ ಕೋವಿಡ್ ಸೋಂಕು ಲಸಿಕೆ ವಿತರಣೆಗಾಗಿ ಇಂದು ದಿನಾಂಕ: 21.06.2021 ರಂದು ಸರ್ಕಾರದಿಂದ 1500 ಜನರಿಗೆ ಲಸಿಕೆ ನೀಡಲು ಗುರು ನಿಗಧಿಪಡಿಸಲಾಗಿದ್ದು, ಅದರಂತೆ ವಾರ್ಡ್ ನಂ. 06ರ ವ್ಯಾಪ್ತಿಯಲ್ಲಿ 8 ವಿವಿಧ ಸ್ಥಳಗಳಲ್ಲಿ ಲಸಿಕೆ ವಿತರಣೆ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. ಹಾಗೂ ಕರೊನಾ ಸೊಂಕು ಇಳಿಕೆಯಾಗಿದ್ದು, ಪ್ರತಿ ದಿನ ವಾರ್ಡ್ ವ್ಯಾಪ್ತಿಯಲ್ಲಿ 5 ರಿಂದ 10 ಸೊಂಕಿತರು ಪತ್ತೆಯಾಗುತ್ತಿರುತ್ತಾರೆ. ಆದುದರಿಂದ ಸಾರ್ವಜನಿಕರು ಸೊಂಕು ಹರಡದಂತೆ ಮುಂಜಾಗ್ರತ ಕ್ರಮಗಳಾದ

ಮಾಸ್ಕ್ ಧರಿಸುವುದು, 6 ಅಡಿಗಳ ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು, ಹಾಗೂ ಆಗಾಗ ಕೈ ತೊಳೆಯುವುದು ಇವುಗಳನ್ನು ಕಡ್ಡಾಯವಾಗಿ ಪಾಲಿಸಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

2. **ಶ್ರೀ ದಾಸಪ್ಪ, ಹೆಗಡೆನಗರ ನಿವಾಸಿ: ರವರು ಮಾತನಾಡಿ**

- ಹೆಗಡೆನಗರ ಸಮುದಾಯಭವನದಲ್ಲಿ ಲಸಿಕೆ ಪಡೆಯಲು ಬರುವ ಸಾರ್ವಜನಿಕರು ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳದೇ ಇರುವುದನ್ನು ಗಮನಿಸಲಾಗಿರುತ್ತದೆ. ಆದುದರಿಂದ ಈ ಬಗ್ಗೆ ಕೂಡಲೇ ಕ್ರಮ ವಹಿಸುವಂಥೆ ಸಭೆಯಲ್ಲಿ ಕೋರಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿ ಗುತ್ತಿಗೆದಾರರು ಘನತ್ಯಾಜ್ಯ ಸಂಗ್ರಹಣೆಯನ್ನು ಮತ್ತು ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲ. ಪ್ರತಿ ದಿನ 4–5 ಆಟೋ ಟಿಪ್ಪರ್‌ಗಳು ಕೆಲಸಕ್ಕೆ ಗೈರು ಹಾಜರಿಯಾಗುತ್ತಿರುವುದರಿಂದ ಸಾರ್ವಜನಿಕರು ತ್ಯಾಜ್ಯವನ್ನು ಬ್ಲಾಕ್‌ಸ್ಪಾಟ್‌ಗಳಲ್ಲಿ ಎಸೆದು ಹೋಗುತ್ತಿರುತ್ತಾರೆ. ಹಾಗೂ ಗುತ್ತಿಗೆದಾರರು ಬ್ಲಾಕ್‌ಸ್ಪಾಟ್‌ಗಳಲ್ಲಿ ತ್ಯಾಜ್ಯವನ್ನು ಸಮಪರ್ಕವಾಗಿ ವಿಲೇವಾರಿ ಮಾಡುತ್ತಿರುವುದಿಲ್ಲ
- ಇಂದಿನ ವಾರ್ಡ್ ಸಮಿತಿ ಸಭೆಗೆ ಬೆಸ್ಕಾಂ, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಪೋಲಿಸ್ ಇಲಾಖೆ, ಮೇಜರ್ ರಸ್ತೆ ವಿಭಾಗದ ಅಧಿಕಾರಿಗಳು ಗೈರು ಹಾಜರಿಯಾಗಿರುವುದರಿಂದ ಸದರಿ ವಿಷಯಕ್ಕೆ ಸಂಬಂಧಿಸಿದಂಥೆ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಬಗೆಹರಿಸಿಕೊಳ್ಳಲು ಸಾಧ್ಯವಾಗುತ್ತಿರುವುದಿಲ್ಲ ಆದುದರಿಂದ ಮುಂದಿನ ಸಭೆಗೆ ಎಲ್ಲಾ ಅಧಿಕಾರಿಗಳು ವಾರ್ಡ್ ಸಭೆಗೆ ತಪ್ಪದೇ ಹಾಜರಿರುವಂತೆ ಕ್ರಮ ಕೈಗೊಳ್ಳಲು ಕೋರಿದರು.

3. ಶ್ರೀ ಶ್ರೀನಿವಾಸ್‌ರಾವ್ ರವರು ಮಾತನಾಡಿ

- ವಾರ್ಡ್ ನಂ 06 ರಲ್ಲಿ ಒಣ ತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಕಾರ್ಯ ಸಮರ್ಪಕವಾಗಿ ಆಗುತ್ತಿರುವುದಿಲ್ಲ ಕನಿಷ್ಟ ದಿನ ಬಿಟ್ಟು ದಿನವಾದರು ಒಣ ತ್ಯಾಜ್ಯವನ್ನು ಸಂಗ್ರಹಣೆ ಮಾಡುವಂತೆ ಕ್ರಮ ವಹಿಸಲು ಕೋರಿದರು.
- ಅಮರಜ್ಯೋತಿ ಬಡಾವಣೆ ಅಡ್ಡರಸ್ತೆಗಳ ಅಭಿವೃದ್ದಿ ಕಾಮಗಾರಿಯನ್ನು ಕೂಡಲೇ ಕೈಗೊಳ್ಳಲು ಕೋರಿದರು.
- ಅಮರಜ್ಯೋತಿ ಬಡಾವಣೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ ಕಾಮಗಾರಿ ಅಪೂರ್ಣವಾಗಿರುತ್ತದೆ ಈ ಬಗ್ಗೆ ಮಾಹಿತಿ ಪಡೆಯಲು ಮುಂದಿನ ಸಭೆಗೆ ಸಂಬಂಧಪಟ್ಟ ಸ.ಕಾ.ಅ ರವರನ್ನು ಸಭೆಗೆ ಹಾಜರಿರುವಂತೆ ಕ್ರಮ ವಹಿಸಲು ಕೋರಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಲಸಿಕೆ ನೀಡುವ ಕಾರ್ಯವನ್ನು ಬಿಬಿಎಂಪಿಯ ಆರೋಗ್ಯ ಇಲಾಖೆಯಿಂದ ಉತ್ತಮವಾಗಿ ಮಾಡಲಾಗುತ್ತಿದ್ದು, ಈ ಕಾರ್ಯಕ್ಕೆ ಶ್ಲಾಘನೆ ವ್ಯಕ್ತಪಡಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಅಭಿವೃದ್ದಿ ಕೆಲಸಗಳು ನಡೆಯುತ್ತಿರುವುದಿಲ್ಲವೆಂದು ಹಾಗೂ ಅಭಿವೃದ್ದಿ ಕಾಮಗಾರಿಗಳನ್ನು ವೇಗವಾಗಿ ಕೈಗೊಳ್ಳುವಂತೆ ಸಭೆಯಲ್ಲಿ ಕೋರಿದರು.

- ವಾರ್ಡ್ ವ್ಯಾಪ್ತಿಯ ಥಣಿಸಂದ್ರ ಮುಖ್ಯರಸ್ತೆಯಲ್ಲಿ ವೈಟ್ ಟ್ಯಾಪಿಂಗ್ ರಸ್ತೆ ನಿರ್ಮಿಸಲಾಗುತ್ತಿದ್ದು, ಸದರಿ ರಸ್ತೆಯ ಪಕ್ಕದ ಚರಂಡಿಗಳ ಮೇಲೆ ಅಲ್ಲಲ್ಲಿ ಸ್ಲ್ಯಾಭ್‌ಗಳನ್ನು ಅಳವಡಿಸಿರುವುದಿಲ್ಲ ಇದರಿಂದ ಸಾರ್ವಜನಿಕರಿಗೆ ತುಂಬ ಅಪಾಯಕಾರಿಯಾಗಿರುತ್ತದೆ ಆದುದರಿಂದ ಈ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳೂ ಕ್ರಮ ವಹಿಸುವಂತೆ ಸಭೆಯಲ್ಲಿ ಕೋರಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ಮಾಹೆ 2 ಸಭೆಗಳನ್ನು ನಡೆಸುತ್ತಿದ್ದು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಪ್ರತಿ ಮಾಹೆಯಲ್ಲಿ ಒಂದು ಸಭೆ ಹೆಗಡೆನಗರದಲ್ಲಿ ಮತ್ತೊಂದು ಸಭೆಯನ್ನು ದಾಸರಹಳ್ಳಿಯಲ್ಲಿ ನಡೆಸುವಂತೆ ಕೋರಿದರು.

4. **ಶ್ರೀ ಮರಿಮಾದಯ್ಯ ಹೆಗಡೆನಗರ ರವರು ಮಾತನಾಡಿ**

- ವಾರ್ಡ್ ವ್ಯಾಪ್ತಿಯಲ್ಲಿ ಮಾನ್ಯ ಶಾಸಕರು ಕೋವಿಡ್ ಲಸಿಕೆ ತೆಗೆದುಕೊಳ್ಳುವ ಸಂಬಂಧ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯವನ್ನು ಬಹಳ ಉತ್ತಮವಾಗಿ ಮಾಡುತ್ತಿದ್ದು, ಇದು ಪ್ರಶಂಸನೀಯವಾಗಿರುತ್ತದೆಂದು ಸಭೆಗೆ ತಿಳಿಸಿದರು.
- ವಿದ್ಯಾನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುವುದರಿಂದ ಒಂದು ಹೊಸದಾಗಿ ಕೊಳವೆ ಬಾವಿಯನ್ನು ಕೊರೆಯಲು ಕ್ರಮ ವಹಿಸುವಂಥೆ ಕೋರಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಮಂಜೂರಾಗಿರುವ ಕಾಮಗಾರಿಗಳನ್ನು ಶೀಘ್ರವಾಗಿ ಪ್ರಾರಂಭಿಸಿ ಪೂರ್ಣಗೊಳಿಸಲು ಕೋರಿದರು.

5. **ಶ್ರೀಮತಿ ಪೂರ್ಣಿಮಾ ಭುವನೇಶ್ವರಿನಗರ ರವರು ಮಾತನಾಡಿ:** ಭುವನೇಶ್ವರಿನಗರದಲ್ಲಿ ಈಗಾಗಲೇ ರಸ್ತೆಗೆ ಜಲ್ಲಿ ಹರಡಿ ಬಹಳ ದಿನಗಳಾಗಿರುತ್ತದೆ ಇದರಿಂದ ಸಾರ್ವಜನಿಕರ ಓಡಾಟಕ್ಕೆ ತುಂಬ ತೊಂದರೆಯಾಗಿರುತ್ತದೆ ಆದುದರಿಂದ ಕೂಡಲೇ ರಸ್ತೆಗೆ ಡಾಂಬರೀಕರಣ ಮಾಡಲು ಕ್ರಮ ವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲು ಮಾನ್ಯ ಅಧ್ಯಕ್ಷರನ್ನು ಕೋರಿದರು.
6. **ಶ್ರೀ ಮುನಿರಾಜು, ದಾಸರಹಳ್ಳಿ ರವರು ಮಾತನಾಡಿ:** ದಾಸರಹಳ್ಳಿ ಕಾಲೋನಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಕೈಗೊಂಡಿರುವ ಒಳಚರಂಡಿ ಪೈಪ್‌ಲೈನ್ ಅಳವಡಿಸುವ ಕಾಮಗಾರಿಯು ಅಪೂರ್ಣವಾಗಿರುತ್ತದೆ ಇದರಿಂದ ನಾಗರೀಕರಿಗೆ ತುಂಬ ತೊಂದರೆಯಾಗಿರುತ್ತದೆ ಇದರಿಂದ ಅತೀ ಶೀಘ್ರವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ವಹಿಸಲು ಕೋರಿದರು ಹಾಗೂ ದಾಸರಹಳ್ಳೀ ಕಾಲೋನಿಯಲ್ಲಿ ಕುಡಿಯುವ ನೀರಿನ ಕೊಳವೆ ಬಾವಿ ಆಗಗ್ಗೆ ರಿಪೇರಿಯಾಗುತ್ತಿದ್ದು ಹೊಸದಾಗಿ ಪಂಪು ಮೋಟಾರ್ ಅಳವಡಿಸಿ ಕ್ರಮ ವಹಿಸಲು ಕೋರಿದರು.
7. **ಶ್ರೀ ಸುರೇಶ್ ದೇವತರಾಜ್, ಸ.ಅ ರವರು ಮಾತನಾಡಿ:** ವಾರ್ಡ್ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗಿರುವ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರಗಳನ್ನು ಸಭೆಗೆ ವಿವರಿಸಿದರು.

- ಸಾಧಿಕ್ ಬಡಾವಣೆ 10 ಅಡ್ಡರಸ್ತೆಗಳಿಗೆ ಸಿಮೆಂಟ್ ಕಾಂಕ್ರೀಟ್ ರಸ್ತೆಯನ್ನು ನಿರ್ಮಿಸಲಾಗಿರುತ್ತದೆ.

- ಮಾರುತಿ ಸಾಮಿಲ್ ಅಡ್ಡರಸ್ತೆಗಳಿಗೆ ಸಿಮೆಂಟ್ ಕಾಂಕ್ರೀಟ್ ರಸ್ತೆಯನ್ನು ನಿರ್ಮಿಸಲಾಗಿರುತ್ತದೆ.ಮೇಸ್ತ್ರೀಪಾಳ್ಯ ಮುಖ್ಯರಸ್ತೆಗೆ ಈಗಾಗಲೇ ಜಲ್ಲಿ ಹರಡಲಾಗಿದದು, ಶೀಘ್ರವಾಗಿ ಡಾಂಬರೀಕರಣ ಮಾಡಲಾಗುತ್ತದೆ.
- ಥಣಿಸಂದ್ರ ಗ್ರಾಮದ ರಸ್ತೆಗಳಿಗೆ ಜಲ್ಲಿ ಹರಡುವ ಕಾಮಗಾರಿ ಪ್ರಗತಿಯಲ್ಲಿರುತ್ತದೆ.
- ಸಾಧಿಕ್ ಬಡಾವಣೆ ಮುಖ್ಯ ರಸ್ತೆಗೆ ಜಲ್ಲಿ ಹರಡುವ ಕಾಮಗಾರಿ ಪ್ರಗತಿಯಲ್ಲಿರುತ್ತದೆ.
- ಸರಾಯಿಪಾಳ್ಯದ ಹೆಚ್.ಪಿ ಶಾಲೆ ಅಕ್ಕಪಕ್ಕದ ರಸ್ತೆಗಳಿಗೆ ಜಲ್ಲಿ ಹರಡಲಾಗಿರುತ್ತದೆ.
- ಭರತ್‌ನಗರ ಬಲೂನ್ ಫ್ಯಾಕ್ಟರಿ ರಸ್ತೆಗೆ ಆರ್.ಸಿ.ಸಿ ಚರಂಡಿ ನಿರ್ಮಾಣ ಮಾಡಲಾಗಿರುತ್ತದೆ.
- ಅಬುಬಕ್ಕರ್ ಮಸೀದಿ ರಸ್ತೆಗೆ ಆರ್.ಸಿ.ಸಿ ಚರಂಡಿ ನಿರ್ಮಾಣ ಮಾಡಲಾಗಿರುತ್ತದೆ
- ಸಾಧಿಕ್ ಬಡಾವಣೆಯಿಂದ ಸರಾಯಿಪಾಳ್ಯಕ್ಕೆ ಹೋಗುವ ರಸ್ತೆಗೆ ಚರಂಡಿಯನ್ನು ನಿರ್ಮಾಣ ಮಾಡಲಾಗಿರುತ್ತದೆ.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿಗಳು, ವಾರ್ಡ್ ಸಮಿತಿರವರು ಮಾತನಾಡಿ ಈವರೆಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರೀಗಣಿಸಿ ಎಲ್ಲಾದೂರು ಮತ್ತು ಸಲಹೆ ಮತ್ತು ಸೂಚನೆಗಳನ್ನು ಕಾರ್ಯರೂಪಕ್ಕೆ ತರಲು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಅಗತ್ಯಕ್ರಮ ಕೈಗೊಳ್ಳುವಂತೆ ಸೂಚಿಸುತ್ತಾ ಸಭೆಗೆ ಹಾಜರಾಗಿದ್ದ ಎಲ್ಲಾ ಅಧಿಕಾರಿಗಳಿಗೆ ಹಾಗೂ ವಿವಿಧ ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಹಾಜರಾಗಿರುವ ಸಾರ್ವಜನಿಕರಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

21.06.2021
ಕಾರ್ಯದರ್ಶಿ
ಹಾಗೂ ಸಹಾಯಕಅಭಿಯಂತರರು
ವಾರ್ಡ್ ನಂ. 06, (ಥಣಿಸಂದ್ರ)

21/6/2021
ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 06(ಥಣಿಸಂದ್ರ)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.